ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

File No:DTE-ADMI0ACM2/17/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:22-09-2020.

**-:: ಸುತ್ತೋಲೆ ::-**

**ವಿಷಯ:** 2020-21ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಅನುಗುಣವಾದ ಕೋರ್ಸ್‌ಗಳಿಗೆ ಸರ್ಕಾರಿ ಮತ್ತು ಅನುದಾನಿತ (ಸಂಜೆ) ಪಾಲಿಟೆಕ್ನಿಕ್‌ಗಳಲ್ಲಿ **ಪ್ರಥಮ ಸಂಜೆ ಡಿಪ್ಲೋಮಾ ಪ್ರವೇಶ ಸಂಬಂಧ** ಅರ್ಜಿಗಳನ್ನು ನೀಡುವ ಮತ್ತು ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕ ವಿಸ್ತರಿಸಿರುವ ಬಗ್ಗೆ.

**ಉಲ್ಲೇಖ:**
1. ಪ್ರಾಂಶುಪಾಲರು, ಎಸ್.ಜೆ. ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಎಸ್‌ಜೆಇಪಿ/01/ಪ್ರವೇಶ/2020, ದಿ:18-09-2020.
2. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:02-09-2020.

-00000000-

2020-21ನೇ ಸಾಲಿನ **ಪ್ರಥಮ ಸೆಮಿಸ್ಟರ್ ಸಂಜೆ ಡಿಪ್ಲೋಮಾ** ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(2)ರ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಪ್ರವೇಶ ಅರ್ಜಿಗಳನ್ನು ನೀಡುವ ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ **ದಿನಾಂಕ:02-09-2020** ಎಂದು ನಿಗಧಿಪಡಿಸಲಾಗಿತ್ತು. ಉಲ್ಲೇಖ(1)ರ ಪ್ರಾಂಶುಪಾಲರ ಪತ್ರದಲ್ಲಿ ಪ್ರವೇಶ ಕೋರಿ ಕಡಿಮೆ ಅರ್ಜಿಗಳು ಸ್ವೀಕೃತವಾಗಿರುವುದರಿಂದ, ಇನ್ನು ಹೆಚ್ಚಿನ ಅರ್ಜಿಗಳು ಸ್ವೀಕೃತವಾಗುವ ಸಂಭವವಿರುವುದರಿಂದ, ಪ್ರವೇಶಾವಧಿಯನ್ನು ವಿಸ್ತರಿಸುವಂತೆ ಮನವಿ ಕೋರಿರುತ್ತಾರೆ.

**ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ದಿನಾಂಕ:05-10-2020ರ ವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ **ದಿ:10-10-2020** ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು

**ಇವರಿಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಮಂಗಳೂರು

ಸೀಟು ಆಯ್ಕೆ ಪ್ರಕ್ರಿಯೆಯನ್ನು ತಮ್ಮ ಸಂಸ್ಥೆಗಳಲ್ಲಿಯೇ ನಡೆಸುವ ಬಗ್ಗೆ ತಮ್ಮ ಹಂತದಲ್ಲಿಯೇ ಕ್ರಮ ತೆಗೆದುಕೊಂಡು ನಿಯಮಗಳ ಪ್ರಕಾರ ಪ್ರವೇಶ ನಡೆಸುವಲ್ಲಿ ಸೂಕ್ತ ವ್ಯವಸ್ಥೆ ಮಾಡಿ ಇಲಾಖೆಗೆ ಮಾಹಿತಿ ನೀಡುವುದು. ಹಾಗೂ ಈ ಬಗ್ಗೆ ಪ್ರತ್ಯೇಕ ಮಾರ್ಗಸೂಚಿಯನ್ನು ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಗಳಯೇ ನೀಡುವುದು. ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲೂ ಸಹ ಪ್ರಕಟಿಸುವುದು.

**ಪ್ರತಿ ಮಾಹಿತಿಗಾಗಿ:–**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ
3. ಜಂಟಿ ನಿರ್ದೇಶಕರು(ಆಡಳಿತ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಸಾರ್ವಜನಿಕ ಸಂಪರ್ಕಾಧಿಕಾರಿ, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಎಸ್.ಟಿ.ಎಲ್ ಮತ್ತು ಡಿವಿಪಿ(2) ವಿಭಾಗಕ್ಕೆ.
8. ಕಛೇರಿ ಪ್ರತಿ.